ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ಭದ್ರಾವತಿ ನಗರದ ಮೈಸೂರು ಕಾಗದ ಕಾರ್ಖಾನೆ ಸ್ಥಿತಿಗತಿ

ಶ್ರೀ ಎಸ್. ರುದ್ರೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) -

59 (205) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಶಿವಮೊಗ್ಗ ಜಿಲ್ಲೆಯ ಭದ್ರಾವತಿ ನಗರದಲ್ಲಿ ಸರ್.ಎಂ. ವಿಶ್ವೇಶ್ವರಯ್ಯ ರವರಿಂದ ಸ್ಥಾಪಿತವಾದ `ಮೈಸೂರು ಕಾಗದ ಕಾರ್ಖಾನೆ' ಯನ್ನು 2015 ರಿಂದ ಏಕಾಏಕಿಯಾಗಿ ಮುಚ್ಚಲು ಕಾರಣವೇನು ; (ಈ ಬಗ್ಗೆ ಈವರೆಗಿನ ಪೂರ್ಣ ವರದಿಯನ್ನು ನೀಡುವುದು)

(ಆ) ಈ ಕಾರ್ಖಾನೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸಾವಿರಾರು ಕಾರ್ಮಿಕರು ಬೀದಿಗೆ ಬಂದಿದ್ದು, ಅವರ ಕುಟುಂಬಗಳು ವಿನಾಕಾರಣ ದುಃಸ್ಥಿತಿಗೆ ತಳ್ಳಲ್ಪಟ್ಟಿರುವುದರಿಂದ ಇವರ ಜೀವನೋಪಾಯಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?